



ಅರುಣ ಪಿ. ಭಟ್ಟ

## ವಾರಭವಿಷ್ಯ: 30.03.2023ದಿಂದ 05.04.2023ವರೆಗೆ




ನೀವು ಕೈಗೊಳ್ಳುವ ಕೆಲಸದಿಂದ ವಿಶ್ವಾಸಾರ್ಹತೆ ಹಾಗೂ ಪ್ರತಿಭೆ ಹೆಚ್ಚಾಗುತ್ತದೆ. ಕೆಲವರು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯ ಉತ್ತಮವಾಗಿದ್ದು, ಸಂತೋಷವಾಗಿ ಇರುತ್ತೀರಿ. ನಿಮ್ಮ ಕೆಲಸದ ಜೊತೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ಸಮಯವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುತ್ತೀರಿ. ಶುಭದಿನ 02. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವ್ಯಾಪಾರ ವ್ಯವಹಾರಗಳಲ್ಲೂ ಮುಂದಿರುತ್ತೀರಿ. ವಾರದ ದ್ವಿತೀಯಾರ್ಧದಲ್ಲಿ ಕೆಲಸ ಕಾರ್ಯಗಳಲ್ಲಿ ತೊಂದರೆ ಎದುರಾಗುತ್ತದೆ. ತಾಂತ್ರಿಕ ಸಲಕರಣೆ, ಕೆಲಸಗಾರರು ಸಮಯಕ್ಕೆ ಸಿಗದಿರುವುದು ಇಂಥ ಕಾರಣಗಳಿಗೆ ತಡ ತೊಂದರೆ ಆಗುತ್ತದೆ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ಶುಭದಿನ 04. ಕಾಲಭೈರವನ ಸೇವೆ ಮಾಡಿರಿ.




ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಯಾವುದೇ ವ್ಯವಹಾರದಲ್ಲಿಯಾದರೂ ಬಹಳ ಎಚ್ಚರಿಕೆಯಿಂದ ವ್ಯವಹರಿಸಿ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ತಲೆ ನೋವು, ಹಲ್ಲು ನೋವು ಕಾಡಬಹುದು. ವ್ಯಾಪಾರ ವ್ಯವಹಾರಗಳಲ್ಲಿ ನಿಮಗೆ ಅನುಕೂಲಕರ ಸನ್ನಿವೇಶ ಇರುತ್ತದೆ. ಶುಭದಿನ 02. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವ್ಯಾಪಾರ, ಮಾರಾಟ ಕ್ಷೇತ್ರದಲ್ಲಿ ಇರುವವರಿಗೆ ಆದಾಯವು ಉತ್ತಮವಾಗಿರುತ್ತದೆ. ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಇದಕ್ಕಾಗಿ ಕೆಲವು ಸಂಸ್ಥೆ ಅಥವಾ ವ್ಯಕ್ತಿಗಳ ಸಹಾಯ ಪಡೆಯುವ ಸಾಧ್ಯತೆ ಇದೆ. ಕೆಲವು ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ವಾರದ ಅಂತ್ಯಕ್ಕೆ ನಿಮಗೆ ಅನುಕೂಲಕರವಾಗಿ ಇರಲಿದೆ. ಶುಭದಿನ 01. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಬಹಳ ಪ್ರಯತ್ನ ಮಾಡುತ್ತೀರಿ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ಹಲವರ ಜತೆಗೆ ಏಕ ಕಾಲಕ್ಕೆ ಸಂಪರ್ಕ ಸಾಧಿಸಿ, ನಿಮ್ಮ ಕೆಲಸ ಕಾರ್ಯಗಳಿಗೆ ಬೇಕಾದ ಮಾಹಿತಿ ಕಲೆ ಹಾಕುತ್ತೀರಿ. ಶುಭದಿನ 03. ಲಿಂಗಾಷ್ಟಕ ಪಠಣ ಮಾಡಿರಿ.




ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ಮೂಲಕ ವ್ಯವಹಾರವನ್ನು ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ನಿಮ್ಮ ಬಹುತೇಕ ಸಮಸ್ಯೆಗಳಿಗೆ ಪರಿಹಾರಗಳು ದೊರೆಯುತ್ತವೆ. ವಿರಾಮಕ್ಕೆ ನಿಮ್ಮದೇ ಸಮಯ ದೊರೆಯುತ್ತದೆ. ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಶುಭದಿನ 30. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಿ ಎದ್ದು ನಿಲ್ಲುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಪ್ರಗತಿ ಕಾಣುತ್ತದೆ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ. ವಾರದ ಅಂತ್ಯಕ್ಕೆ ಸರಿಯುತ್ತಾ ಉತ್ತಮ ಹಾಗೂ ಅನುಕೂಲಕರವಾದ ಫಲಿತಾಂಶ ದೊರೆಯಲಿದೆ. ಶುಭದಿನ 03. ಸೌಂದರ್ಯ ಲಹರಿ ಪಠಿಸಿರಿ.




ವಾರದ ಮೊದಲ ಭಾಗದಿಂದಲೇ ಆರೋಗ್ಯ ಉತ್ತಮವಾಗಿ ಇರುತ್ತದೆ. ರಾಜಕೀಯದಲ್ಲಿ ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ಕೊಳ್ಳಲು ಲೆಕ್ಕ ಹಾಕಿಕೊಂಡಿದ್ದ ಭೂಮಿಯೊಂದರ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಉದ್ಯೋಗ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವರ್ಗವಾಗುವ ಸಾಧ್ಯತೆ ಇದೆ. ಕೆಲಸವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮಾಡಲಿದ್ದೀರಿ. ಶುಭದಿನ 02. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.




ವಾರದ ಶುರುವಿನಿಂದಲೇ ವ್ಯಾಪಾರಸ್ಥರು, ಉದ್ಯೋಗಸ್ಥರು ತಮ್ಮ ವ್ಯಾಪಾರ ಉದ್ಯಮದ ಪ್ರಗತಿಯ ಪರಿಶೀಲನೆ ಮಾಡುವುದರಲ್ಲಿ ಸಕ್ರಿಯರಾಗುತ್ತೀರಿ. ನಿಮ್ಮ ಕಾರ್ಯಗಳನ್ನು ವೇಗವಾಗಿ ಮಾಡಲಿದ್ದೀರಿ. ಈಗಿನ ಪರಿಸ್ಥಿತಿಯಲ್ಲಿ ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣ ಮಾಡಲು ಹೆಚ್ಚು ಹಣ ಖರ್ಚು ಮಾಡಬೇಕಾಗುತ್ತದೆ. ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ 05. ವಿಷ್ಣು ಸಹಸ್ರನಾಮ ಓದಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ ಪಡೆಯುವ ಅವಕಾಶ ಇದೆ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಶಸ್ಸು ಪಡೆಯುವ ಅವಕಾಶಗಳು ದೊರೆಯಲಿವೆ. ನಿಮ್ಮ ಮಗ ಅಥವಾ ಮಗಳ ಮದುವೆಯ ವಿಚಾರವನ್ನು ಅಂತಿಮಗೊಳಿಸುವ ಅವಕಾಶ ಇದೆ. ಶುಭದಿನ 04. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಉದ್ಯೋಗದಲ್ಲಿ ಸಾಧನೆ ಮಾಡುವ ಅವಕಾಶಗಳಿವೆ. ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ವ್ಯಾಪಾರಸ್ಥರು ಸ್ಥಳೀಯವಾಗಿ ವಿಶ್ವಾಸಾರ್ಹತೆಯನ್ನು ಹೆಚ್ಚಿಸಿಕೊಳ್ಳುತ್ತೀರಿ. ನಿಮ್ಮ ಆದಾಯ ಉತ್ತಮವಾಗಿರುತ್ತದೆ. ಸಾಮಾಜಿಕವಾಗಿ ಗೌರವ– ಮನ್ನಣೆಗಳನ್ನು ಪಡೆಯಲಿದ್ದೀರಿ. ಶುಭದಿನ 02. ಸುಬ್ರಮಣ್ಯ ಜಪ ಮಾಡಿರಿ.




ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜೊತೆ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಶ್ವಾಸಕೋಶ ಸಮಸ್ಯೆ ಎದುರಾಗಬಹುದು. ಆರೋಗ್ಯ ಉತ್ತಮವಾಗಿ ಇರುತ್ತದೆ. ವ್ಯಾಸಂಗದಲ್ಲಿ ವಿದ್ಯಾರ್ಥಿಗಳಿಗೆ ಪ್ರಗತಿ ಇದೆ. ಸಾಮಾಜಿಕ ಹಾಗೂ ಆರ್ಥಿಕ ಸ್ಥಾನಮಾನ ಹೆಚ್ಚಾಗಲಿದೆ. ಶುಭದಿನ 03. ಶ್ರೀ ದುರ್ಗಾ ಆರಾಧನೆ ಮಾಡಿರಿ.